# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 29-03-2021 ಪ್ರಶ್ನೆ ಸಂಖ್ಯೆ : 1997 (2335)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 29-03-2021

ಉತ್ತರಿಸುವ ಸಚಿವರು: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ವಿಷಯ : ಅನುದಾನಿತ ಪದವಿ ಪೂರ್ವ ಕಾಲೇಜುಗಳ ಕಾರ್ಯಭಾರ ಹಂಚಿಕೆ ಮಾಡುವ ಬಗ್ಗೆ

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ/ಅನುದಾನಿತ- ಅನುದಾನರಹಿತ ಪದವಿ ಪೂರ್ವ ಕಾಲೇಜುಗಳೆಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಕಾರ್ಯಭಾರ ಅಂದರೇನು ; ಪದವಿ ಪೂರ್ವ ಉಪನ್ಯಾಸಕರಿಗೆ ಸರ್ಕಾರವು ಒಂದು ವಾರಕ್ಕೆ ಎಷ್ಟು ಗಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಲಾಗಿದೆ ; ಕಾರ್ಯಭಾರ ನಿಗದಿಪಡಿಸಲು ಇರುವ ಮಾನದಂಡಗಳೇನು ;

(ಇ) ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ:31.12.2015 ರವರೆಗೆ ನಿಧನ, ನಿವೃತ್ತಿ ಹಾಗೂ ರಾಜೀನಾಮೆಯಿಂದ ತೆರವಾದ ಬೋಧಕ ಹುದ್ದೆಗಳನ್ನು ತುಂಬಿಕೊಳ್ಳಲು ಅನುಮತಿ ನೀಡಿರುವುದು ನಿಜವೇ ;

(ಈ) ಹಾಗಾದಲ್ಲಿ, ದಿನಾಂಕ:31.12.2020ರ ಅಂತ್ಯಕ್ಕೆ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯಭಾರದ ಕೊರತೆಯಿದ್ದು, ಈ ಕಾರ್ಯಭಾರವನ್ನು ಪಕ್ಕದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿನ ಕಾರ್ಯಭಾರಕ್ಕೆ ಹೊಂದಾಣಿಕೆ ಮಾಡಿರುವ ಪ್ರಕರಣಗಳೆಷ್ಟು ? (ವಿವರವಾಗಿ ಜಿಲ್ಲಾವಾರು ಸಂಪೂರ್ಣ ಕಾಲೇಜಿನ ವಿಳಾಸ ಹಾಗೂ ಹುದ್ದೆಯ ಪದನಾಮದೊಂದಿಗೆ ವಿವರವಾದ ಮಾಹಿತಿಯನ್ನು ನೀಡುವುದು)